ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	400
ಸದಸ್ಯರ ಹೆಸರು	:	ಶ್ರೀ ಮರಿತಿಬ್ಬೇಗೌಡ
ಉತ್ತರಿಸುವ ದಿನಾಂಕ	:	18-02-2022
ಉತ್ತರಿಸುವ ಸಚಿವರು	:	ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಸಮಾಜ ಕಲ್ಯಾಣ ಇಲಾಖೆಯಡಿ ಕ್ರೈಸ್ ವತಿಯಿಂದ ನಡೆಯುತ್ತಿರುವ ವಿವಿಧ ವಸತಿ ನಿಲಯಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಶಿಕ್ಷಕರನ್ನು ಖಾಯಂ ಮಾಡುವಂತೆ ಮಾನ್ಯ ಉಚ್ಚನ್ಯಾಯಾಲಯ ನಿರ್ದೇಶನ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ 826 ವಸತಿ ಶಾಲೆ/ಕಾಲೇಜುಗಳು (ಪರಿಶಿಷ್ಟ ಜಾತಿ-503, ಪರಿಶಿಷ್ಟ ವರ್ಗ-146, ಹಿಂದುಳಿದವರ್ಗ-167) ಕಾರ್ಯನಿರ್ವಹಿಸುತ್ತಿವೆ. WP No: 12562-12564/ 2018, WP.No 46240/ 2018, WP No 45714-45716 /2018, 52876/ 2018 & 1412-1546 /2019ರ ಪ್ರಕರಣಗಳಿಗೆ ಸಂಬಂಧಿಸಿದಂತೆ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ಈ ಕೆಳಕಂಡಂತೆ ಅಂತಿಮ ಆದೇಶವನ್ನು ನೀಡಿರುತ್ತದೆ "The third respondent is directed to consider the representation of the petitioners strictly in accordance with law. The writ petitions stand disposed off accordingly. The interim order granted earlier shall stand dissolved". ಮಾನ್ಯ ನ್ಯಾಯಾಲಯದ ಆದೇಶದಂತೆ ಅತಿಥಿ ಶಿಕ್ಷಕರ ಮನವಿಗಳನ್ನು ಪರಿಶೀಲಿಸಿ, ಅತಿಥಿ ಶಿಕ್ಷಕರನ್ನು ಪೂರ್ಣ ಕಾಲಿಕ ಶಿಕ್ಷಕರನ್ನಾಗಿ ಖಾಯಂಗೊಳಿಸಲು ನಿಯಮಾನುಸಾರ ಅವಕಾಶವಿರುವುದಿಲ್ಲ ಎಂದು ಹಿಂಬರಹವನ್ನು ನೀಡಲಾಗಿರುತ್ತದೆ. ಆದ್ದರಿಂದ ಅತಿಥಿ ಶಿಕ್ಷಕರನ್ನು ಖಾಯಂಗೊಳಿಸಲು ನಿಯಮಾನುಸಾರ ಅವಕಾಶವಿರುವುದಿಲ್ಲ.
ಆ)	ಹಾಗಿದ್ದಲ್ಲಿ, ಈ ಸಂಬಂಧ ಸರ್ಕಾರ ರೂಪಿಸಿರುವ ರೂಪುರೇಷೆಗಳೇನು;(ವಿವರ ನೀಡುವುದು)	
ಇ)	ಸದರಿಯವರನ್ನು ಖಾಯಂ ಮಾಡುವಲ್ಲಿ ಆಗಿರುವ ವಿಳಂಬಕ್ಕೆ ಕಾರಣಗಳೇನು;	
ಈ)	ಯಾವ ಕಾಲಮಿತಿಯಲ್ಲಿ ಸದರಿಯವರನ್ನು ಖಾಯಂಗೊಳಿಸಲಾಗುವುದು?	

ಸಂಖ್ಯೆ: ಸಕಇ 91 ಮೊದೇಶಾ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು